# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಸ್.ಸಿ.ಹಿರೇಮಠ, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಜಮಖಂಡಿ ಇವರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BGM-1067/2014/ARE-5 ದಿನಾಂಕ. 23.12.2016.

2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BGM-1067/2014/ARE-5 ದಿನಾಂಕ. 21.12.2016.

-----

## ಪ್ರಸ್ತಾವನೆ

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 04.02.2017ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1 ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ದಶರಥ ಯಮನಪ್ಪ ಕಾಂಬಳೆ, ಸಸಾಲಟ್ಟಿ ಗ್ರಾಮ, ಜಮಖಂಡಿ ತಾಲ್ಲೂಕು, ಬಾಗಲಕೋಟ ಜಿಲ್ಲೆ ಇವರು ಶ್ರೀ ಪ್ರಲ್ಹಾದ ಉರ್ಫ ಪ್ರಸಾದ ಪ್ರಕಾಶ ರಾವಳ, ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪ್ರಭಾರ), ಸಸಾಲಟ್ಟಿ ಗ್ರಾಮ ಪಂಚಾಯತ, ಜಮಖಂಡಿ ತಾಲ್ಲೂಕು, ಬಾಗಲಕೋಟ ಜಿಲ್ಲೆ ಇವರು 2010 ರಿಂದ 2014-15ನೇ ಸಾಲಿನವರೆಗೆ ಉದ್ಯೋಗ ಖಾತ್ರಿ ಯೋಜನೆ ಹಾಗೂ ಇತರೆ ಯೋಜನೆಗಳಲ್ಲಿ ಅವ್ಯವಹಾರ ಎಸಗಿ ಸರ್ಕಾರದ ಹಣವನ್ನು ದುರುಪಯೋಗ ಪಡಿಸಿಕೊಂಡಿರುತ್ತಾರೆಂದು ಆದ ಕಾರಣ ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತರಿಂದ ಆಕ್ಷೇಪಣೆಯನ್ನು ಪಡೆದುಕೊಂಡಿದ್ದು, ಸದರಿಯವರು ತಮ್ಮ ಮೇಲಿನ ಆಪಾದನೆಗಳನ್ನು ಅಲ್ಲಗಳೆದಿರುತ್ತಾರೆಂದು ತಿಳಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ತನಿಖೆ ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಈ ಕೆಳಕಂಡ ಅಂಶಗಳು ಕಂಡುಬರುತ್ತವೆ:-

ಅ) ಸಸಾಲಟ್ಟಿ ಗ್ರಾಮದ ಶ್ರೀ ಮಾದೇವ ಪರತ್ನವರ ಇವರು ದಿನಾಂಕ 16.12.2012ರಂದು ನಿಧನ ಹೊಂದಿರುತ್ತಾರೆ. ಆದರೆ, ಸದರಿಯವರ ಹೆಸರಿನಲ್ಲಿ ಜಾಬ್ ಕಾರ್ಡ್ ನೀಡಿ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ದಿನಾಂಕ 05.01.2013 ರಿಂದ 11.01.2013ರ ವರೆಗೆ ಕೆಲಸ ನಿರ್ವಹಿಸಿರುತ್ತಾರೆಂದು ರೂ. 930/-ಗಳ ಕೂಲಿಯನ್ನು ಪಾವತಿಸಲಾಗಿರುತ್ತದೆ. ಇದಕ್ಕೆ ಶ್ರೀ ಗಂಗಾಧರ ಸರಿಕಾರ್ , ಅರಣ್ಯ ಕಾವಲುಗಾರ ಹಾಗೂ ಶ್ರೀ ಎಸ್.ಸಿ.ಹಿರೇಮಠ, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಜಮಖಂಡಿ ಇವರು ಕಾರಣರಾಗಿರುತ್ತಾರೆ.

ಆ) ಶಾಲಾ ವಿದ್ಯಾರ್ಥಿಗಳಾಗಿರುವ ಶ್ರೀ ಆರೀಪ್ ರಾಜು ದರವಾನ ಹಾಗೂ ಶ್ರಿ ಆಶಿಪ್ ರಾಜು ದರವಾನ ಇವರುಗಳು ಚಿನ್ನಪ್ಪ ಸಿದ್ದಮಲ್ಲಪ್ಪ ಉಳ್ಳಾಗಡ್ಡಿ ಇವರ ಹೊಲದಲ್ಲಿ ಬದುವು ನಿರ್ಮಾಣ ಕಾಮಗಾರಿ ಇಎನ್‌ಎಮ್‌ಆರ್ ಸಂಖ್ಯೆ 1908ರಲ್ಲಿ ದಿನಾಂಕ 17.11.2013 ರಿಂದ 23.11.2013ರ ವರೆಗೆ ಕೂಲಿ ಹಣ ರೂ. 2088/-ಗಳನ್ನು ಪಾವತಿಸಲಾಗಿದೆಯಂದು ಇದಕ್ಕೆ ಶ್ರೀ ಎಸ್.ಎಸ್.ಹಂಜಗಿ, ಜಲಾನಯನ ಅಧಿಕಾರಿಗಳು ಹಾಗೂ ಶ್ರಿ ಎಸ್.ಸಿ.ಹಿರೇಮಠ, ಕಿರಿಯ ಇಂಜಿನಿಯರ್ ಇವರುಗಳು ಕಾರಣರಾಗಿರುತ್ತಾರೆ.

ಸದರಿ ದೂರು ಹಾಗೂ ತನಿಖಾ ವರದಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತರಿಂದ ಆಕ್ಷೇಪಣೆಗಳನ್ನು ಪಡೆದುಕೊಂಡಿದ್ದು, ಶ್ರೀ ಗಂಗಾಧರ ಸರಿಕಾರ, ಅರಣ್ಯ ಕಾವಲುಗಾರ ಇವರು ಸಲ್ಲಿಸಿರುವ ಆಕ್ಷೇಪಣೆಯಲ್ಲಿ ಶ್ರೀ ಮಹದೇವ ಪರತ್ನವರ ಇವರು ದಿನಾಂಕ 16.12.2012ರಂದು ಮರಣ ಹೊಂದಿದ ನಂತರ ಇವರ ಸ್ಥಳದಲ್ಲಿ ಇವರ ಮಗನು ಕೆಲಸ ಮಾಡಿರುತ್ತಾನೆಂದು, ಶ್ರೀ ಎಸ್.ಸಿ.ಹಿರೇಮಠ, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಜಮಖಂಡಿ ಇವರು ಶ್ರೀ ಮಹಾದೇವ ಪರತ್ನವರ ಇವರು ಮರಣ ಹೊಂದಿದ್ದರೂ ಸಹ ಇವರ ಹೆಸರಿನಲ್ಲಿ ದಿನಾಂಕ 05.01.2013 ರಿಂದ 11.03.2013ರ ಅವಧಿಗೆ ಸಂದಾಯ ಮಾಡಲಾದ ಸಂಬಳದ ಕುರಿತು ಅಲ್ಲಗಳೆದಿರುವುದಿಲ್ಲವೆಂದು, ಶ್ರಿ ಎಸ್.ಎಸ್.ಹಂಜಗಿ, ಸಹಾಯಕ ಕೃಷಿ ಅಧಿಕಾರಿ ಇವರು ಶ್ರೀ ಆರೀಪ್ ರಾಜು ದರವಾನ ಹಾಗೂ ಶ್ರಿ ಆಶಿಪ್ ರಾಜು ದರವಾನ ಇವರುಗಳು 10 ವರ್ಷದ ವಯಸ್ಸಿನ ಒಳಗಿನವರಾಗಿದ್ದ ಕಾರಣ ಇವರಿಗೆ ಪಾವತಿಸಲಾದ ಮೊತ್ತ ರೂ. 2304/- ಮತ್ತು ದಂಡದ ಮೊತ್ತ ರೂ. 2802/- ಒಟ್ಟಾರೆ ರೂ. 5106/-ಗಳನ್ನು ವಸೂಲಿ ಮಾಡಿ ಸರ್ಕಾರಕ್ಕೆ ಜಮಾ ಮಾಡಲಾಗಿದೆ ಎಂದು ತಿಳಿಸಿರುತ್ತಾರೆಂದು ಹಾಗೂ ಮತ್ತೊಬ್ಬ ಆಪಾದಿತ ನೌಕರರು ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-1ರವರು ತನಿಖಾ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಭಾಗಿಯಾಗಿರುವ ಈ ಕೆಳಕಂಡ ಆಪಾದಿತರು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ಸರ್ಕಾರದ ಹಣವನ್ನು ದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆಯೆಂದು, ಸದರಿಯವರುಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ

ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-1ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ:-

1. ಶ್ರೀ ಎನ್.ಜಿ.ಬಿಧರಿ, ಅರಣ್ಯ ಪ್ರವರ್ತಕ, ಸಾಮಾಜಿಕ ಅರಣ್ಯ, ವಲಯ ಅರಣ್ಯಾಧಿಕಾರಿ ಕಚೇರಿ, ಜಮಖಂಡಿ
2. ಶ್ರೀ ಗಂಗಾಧರ ಸರಿಕರ, ಅರಣ್ಯ ಕಾವಲುಗಾರ, ಸಾಮಾಜಿಕ ಅರಣ್ಯ, ವಲಯ ಅರಣ್ಯಾಧಿಕಾರಿ ಕಚೇರಿ, ಜಮಖಂಡಿ.
3. ಶ್ರೀ ಎಸ್.ಸಿ.ಹಿರೇಮಠ, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಜಮಖಂಡಿ.
4. ಶ್ರೀ ಎಸ್.ಎಸ್.ಹಂಜಗಿ, ಸಹಾಯಕ ಕೃಷಿ ಅಧಿಕಾರಿ, ರೈತ ಕೃಷಿ ಕೇಂದ್ರ, ಸಂಡೂರ, ಬಿಜಾಪುರ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಪ್ರಕರಣದಲ್ಲಿ ಭಾಗಿಯಾಗಿರುವ ಮೇಲ್ಕಂಡ ಆಪಾದಿತರು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಸಸಾಲಟ್ಟಿ ಗ್ರಾಮದಲ್ಲಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಸರ್ಕಾರದ ಹಣವನ್ನು ದುರುಪಯೋಗ ಪಡಿಸಿಕೊಂಡಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಆದ್ದರಿಂದ ಸದರಿಯವರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) (i) (ii) & (iii) ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿ ಹಣದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಅವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವುದು ಅವಶ್ಯವೆಂದು ಕಂಡುಬರುತ್ತದೆ.

ಪ್ರಕರಣದಲ್ಲಿ ಭಾಗಿಯಾಗಿರುವ ಮೇಲ್ಕಂಡ 4 ಜನ ಆಪಾದಿತರುಗಳ ಪೈಕಿ ಶ್ರೀ ಎಸ್.ಸಿ.ಹಿರೇಮಠ, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಜಮಖಂಡಿ ಇವರ ವಿರುದ್ಧದ ಆರೋಪಗಳ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕ್ರಮವಹಿಸಬೇಕಾಗಿದ್ದು, ಇನ್ನುಳಿದ ಆಪಾದಿತರುಗಳ ವಿರುದ್ಧ ಅವರುಗಳ ಸಕ್ಷಮ ಪ್ರಾಧಿಕಾರವಾದ ಅರಣ್ಯ ಇಲಾಖೆಯ ವತಿಯಿಂದ ಕ್ರಮ ವಹಿಸಲಾಗುತ್ತಿದೆ. ಆದ್ದರಿಂದ, ಶ್ರೀ ಎಸ್.ಸಿ.ಹಿರೇಮಠ, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಜಮಖಂಡಿ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 20 ಇಎನ್‌ಕ್ಯೂ 2017 ಬೆಂಗಳೂರು, ದಿನಾಂಕ. 07.03.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಎಸ್.ಸಿ.ಹಿರೇಮಠ, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಜಮಖಂಡಿ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ

ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ:-

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

07/03/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ
6. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು
8. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
9. ಅಪರ ನಿಬಂಧಕರು ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸಂಬಂಧಪಟ್ಟ ಆಪಾದಿತ ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರ ಮುಖಾಂತರ.
11. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
12. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಬಿ&ಸಿ).
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.